# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **490** |
| ಸದಸ್ಯರ ಹೆಸರು | : | ಶ್ರೀ ಕೆ.ಹರೀಶ್ ಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 21-02-2022 |
| ಉತ್ತರಿಸುವ ಸಚಿವರು | : | ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

****

| | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲ್ಲೂಕಿನಲ್ಲಿ ವಿದ್ಯುತ್ ಕಡಿತಗೊಳಿಸುತ್ತಿರುವುದರಿಂದ ಜನಸಾಮಾನ್ಯರು ಸಮಸ್ಯೆ ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಮಂಗಳೂರು ವಿದ್ಯುತ್ ಸರಬರಾಜು ಕಂಪನಿಯ ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲ್ಲೂಕಿನಲ್ಲಿರುವ 110/33/11ಕೆವಿ ಗುರುವಾಯನಕೆರೆ ವಿದ್ಯುತ್ ಉಪಕೇಂದ್ರ, 33/11ಕೆವಿ ಬೆಳ್ತಂಗಡಿ, ಕಕ್ಕಿಂಜೆ, ಧರ್ಮಸ್ಥಳ, ವೇಣೂರು ವಿದ್ಯುತ್ ಉಪಕೇಂದ್ರಗಳ ವ್ಯಾಪ್ತಿಯಲ್ಲಿ ಬೇಸಿಗೆ ಕಾಲದ ಅವಧಿಯಲ್ಲಿ ಹೆಚ್ಚಿನ ಬೇಡಿಕೆಯಿಂದ ದಿನದ ಕೆಲವೊಂದು ಅವಧಿಯಲ್ಲಿ ಅನಿವಾರ್ಯ ಸಂದರ್ಭಗಳಲ್ಲಿ ಹೊರೆಯನ್ನು ನಿಯಂತ್ರಿಸುವ ದೃಷ್ಟಿಯಿಂದ ಗ್ರಾಮಾಂತರ ಫೀಡರ್‌ಗಳಲ್ಲಿ ದಿನದಲ್ಲಿ ಎರಡರಿಂದ ಮೂರು ಗಂಟೆಗಳ ಅವಧಿಗೆ ವಿದ್ಯುತ್ ಕಡಿತ ಮಾಡಲಾಗುತ್ತಿದೆ.<br><br>ಕಕ್ಕಿಂಜೆ ಮತ್ತು ವೇಣೂರು 33/11 ಕೆವಿ ವಿದ್ಯುತ್ ಉಪಕೇಂದ್ರಗಳ ವ್ಯಾಪ್ತಿಯ ಪ್ರದೇಶಗಳಲ್ಲಿ ದಿನದಲ್ಲಿ 20 ರಿಂದ 24 ಗಂಟೆವರೆಗೆ 3 ಫೇಸ್ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ.<br><br>ಬೆಳ್ತಂಗಡಿ ಮತ್ತು ಧರ್ಮಸ್ಥಳ 33/11ಕೆವಿ ವಿದ್ಯುತ್ ಉಪಕೇಂದ್ರಗಳ ವ್ಯಾಪ್ತಿಯ ಕೊಯ್ಯೂರು, ಬಂದಾರು, ನ್ಯಾಯತರ್ಪು, ಬೆಳಾಲು, ಲಾಯಿಲ, ನಡ, ನಾವೂರು, ಇಂದಬೆಟ್ಟು, ಮಿತ್ತಬಾಗಿಲು, ಮಲವಂತಿಗೆ, ನಿಡ್ಲೆ, ಕಳಂಜ, ರೇಖ್ಯಾ, ಶಿಶಿಲ, ಶಿಬಾಜೆ, ಕೊಕ್ಕಡ, ಹತ್ಯಡ್ಕ, ಪುದುವೆಟ್ಟು ಪ್ರದೇಶಗಳಲ್ಲಿ ದಿನದಲ್ಲಿ 12 ರಿಂದ 15 ಗಂಟೆವರೆಗೆ 3 ಫೇಸ್ ವಿದ್ಯುತ್ ಸರಬರಾಜು ಮಾಡಲಾಗುತ್ತಿದ್ದು ಉಳಿದ ಅವಧಿಗೆ ಸಿಂಗಲ್ ಫೇಸ್ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ. |
| ಆ) | ಬಂದಿದ್ದಲ್ಲಿ, 3 ಫೇಸ್ ವಿದ್ಯುತ್ ನೀಡದಿರುವುದರಿಂದ ನೀರಿದ್ದರೂ ಕಾಫಿಗೆ ಬಳಸಲಾಗದ ಪರಿಸ್ಥಿತಿಯಿಂದ ಗುಣಮಟ್ಟದ ವಿದ್ಯುತ್ ಪೂರೈಕೆಗೆ ಸರ್ಕಾರವು ಯಾವ ಕ್ರಮಗಳನ್ನು ಕೈಗೊಳ್ಳಲಿದೆ? (ವಿವರ ನೀಡುವುದು) | |

...2

| | | | |
|---|---|---|---|
| | | | ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ವತಿಯಿಂದ ಬೆಳ್ತಂಗಡಿ ತಾಲೂಕಿನ ವ್ಯಾಪ್ತಿಯಲ್ಲಿ ಗುಣಮಟ್ಟದ ವಿದ್ಯುತ್ ಸರಬರಾಜಿಗಾಗಿ ಈಗಾಗಲೇ 110/33/11 ಕೆವಿ ಗುರುವಾಯನಕೆರೆ ವಿದ್ಯುತ್ ಉಪಕೇಂದ್ರದಲ್ಲಿ, ಹೆಚ್ಚುವರಿಯಾಗಿ 1*20 ಎಂವಿಎ ಶಕ್ತಿ ಪರಿವರ್ತಕ ಅಳವಡಿಸುವ ಕಾಮಗಾರಿಯ ಟೆಂಡರ್ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.<br><br>110/11 ಕೆವಿ ವಿದ್ಯುತ್ ಉಪಕೇಂದ್ರವನ್ನು ಕುತ್ಲೂರಿನಲ್ಲಿ ಸ್ಥಾಪಿಸುವ ಉದ್ದೇಶದಿಂದ ಸೂಕ್ತ ಜಾಗವನ್ನು ಗುರುತಿಸಲಾಗಿದ್ದು ಭೂ ಸ್ವಾಧೀನ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.<br><br>ಮಂಗಳೂರು ವಿದ್ಯುತ್ ಸರಬರಾಜು ಕಂಪನಿ ವತಿಯಿಂದ ಉಜಿರೆ ಎಂಬಲ್ಲಿ 33/11 ಕೆವಿ ಉಪಕೇಂದ್ರ ಮತ್ತು ಪಿಲಿಕಳ ಎಂಬಲ್ಲಿ 33/11 ಕೆವಿ ಉಪಕೇಂದ್ರಗಳನ್ನು ಸ್ಥಾಪಿಸಲು ಆರ್.ಡಿ.ಎಸ್.ಎಸ್. ಯೋಜನೆಯಡಿ ಪ್ರಸ್ತಾವನೆಯನ್ನು ಸಲ್ಲಿಸಲಾಗಿದ್ದು ಈಗಾಗಲೇ ಜಮೀನನ್ನು ಗುರುತಿಸಿ ಭೂ ಸ್ವಾಧೀನ ಪಡೆಯಲಾಗಿರುತ್ತದೆ.<br><br>ಈ ಎಲ್ಲಾ ಕಾಮಗಾರಿಗಳು ಪೂರ್ಣಗೊಂಡಲ್ಲಿ ಹಾಲಿ ಇರುವ ಉಪಕೇಂದ್ರಗಳ ಮೇಲಿನ ಹೊರೆಯನ್ನು ಕಡಿಮೆಗೊಳಿಸಿ ಗ್ರಾಹಕರಿಗೆ ನಿರಂತರ ವಿದ್ಯುತ್ ಸರಬರಾಜು ಮಾಡಲು ಸಾಧ್ಯವಾಗುವುದು. |

ಸಂಖ್ಯೆ: ಎನರ್ಜಿ 24 ಇಬಿಎಸ್ 2022

(ವಿ ಸುನಿಲ್ ಕುಮಾರ್)
ಇಂಧನ ಹಾಗೂ ಕನ್ನಡ ಮತ್ತು
ಸಂಸ್ಕೃತಿ ಸಚಿವರು